# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 216

ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 14-02-2024.

ಉತ್ತರಿಸುವ ಸಚಿವರು : ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದೆಯೇ; ಇಲ್ಲದಿದ್ದಲ್ಲಿ ರಚಿಸದಿರಲು ಕಾರಣವೇನು; | ಹೌದು, ಸರ್ಕಾರದ ಆದೇಶ ಸಂಖ್ಯೆ: MWD 154 MDS 2010, Dated:15.03.2011 ರಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವೃಂದ ಹಾಗೂ ನೇಮಕಾತಿ ನಿಯಮಗಳನ್ನು ರಚಿಸಲಾಗಿದೆ. |
| ಆ. | ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ ಜಿಲ್ಲಾ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಅಧಿಕಾರಿಗಳು, ತಾಲ್ಲೂಕು ಅಧಿಕಾರಿಗಳು, ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಮುಖ್ಯೋಪಾಧ್ಯಾಯರು, ಮುರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜು ಪ್ರಾಚಾರ್ಯರು, ಮೌಲಾನಾ ಆಜಾದ ಮಾದರಿ ಆಂಗ್ಲ ಮಾಧ್ಯಮ ಶಾಲೆಯ ಪ್ರಾಚಾರ್ಯರ ಹುದ್ದೆಗಳು ಒಂದೇ ಪದನಾಮ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ರೀತಿಯ ವ್ಯವಸ್ಥೆಯಲ್ಲಿ ಸಿಬ್ಬಂದಿಗಳು ಕಾರ್ಯನಿರ್ವಹಿಸಲು ಮುಜುಗರವಾಗುವುದಿಲ್ಲವೇ; ಸಿಬ್ಬಂದಿಗಳು ಮತ್ತು ಅಧಿಕಾರಿಗಳ ನಡುವೆ ಸಂಹವನ ಕೊರತೆಯಿಂದ ಆಡಳಿತಕ್ಕೆ ತೊಂದರೆಯಾಗುತ್ತಿಲ್ಲವೇ; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು; | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಅಧಿಕಾರಿಗಳು; ತಾಲ್ಲೂಕು ವಿಸ್ತರಣಾಧಿಕಾರಿಗಳು; ಪ್ರಾಂಶುಪಾಲರು, ಮೊರಾರ್ಜಿದೇಸಾಯಿ ವಸತಿ ಶಾಲೆ; ಪ್ರಾಂಶುಪಾಲರು, ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜು ಮತ್ತು ಪ್ರಾಂಶುಪಾಲರು, ಮಾದರಿ ವಸತಿ ಶಾಲೆ (ನವೋದಯ) ವೃಂದದ ಹುದ್ದೆಗಳಿಗೆ ಒಂದೇ ಪದನಾಮ ಇರುವುದಿಲ್ಲ ಹಾಗೂ ಆಡಳಿತಾತ್ಮಕವಾಗಿ ಯಾವುದೇ ತೊಂದರೆಯಾಗುತ್ತಿರುವುದಿಲ್ಲ. |
| ಇ. | ಸದರಿ ಶಾಲಾ ಕಾಲೇಜುಗಳ ಮುಖ್ಯಸ್ಥರು ಮತ್ತು ಜಿಲ್ಲಾ ಹಾಗೂ ತಾಲ್ಲೂಕು ಅಧಿಕಾರಿಗಳ ಪದನಾಮ ಬದಲಾವಣೆ ಮಾಡುವುದರ ಕುರಿತು ಸರ್ಕಾರಕ್ಕೆ ಇರುವ ತೊಂದರೆ ಏನು; ಈ ಬಗ್ಗೆ ಜಿಲ್ಲಾ ಮಟ್ಟದಲ್ಲಿ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಯಾವಾಗ ಸರಿಪಡಿಸಲಾಗುವುದು? | ಉದ್ಭವಿಸುವುದಿಲ್ಲ. |

ಸಂಖ್ಯೆ:MWD 11 LMQ 2024

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು